**ಕರ್ನಾಟಕ ಸರ್ಕಾರ**

ಸಂಖ್ಯೆ: ಪಪೂಶಿಇ/ಆಡಳಿತ(ಎ)/ಉ.ವರ್ಗ 01/2017-18 ದಿನಾಂಕ:14/03/2018

## ಜ್ಞಾಪನ

ವಿಷಯ:- 2017-18ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದದ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ನಿರ್ವಹಿಸಲು ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ:- ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 24-01-2018

*****

2017-18ನೇ ಸಾಲಿಗೆ ಉಪನ್ಯಾಸಕರ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ನಡೆಸಲು ವರ್ಗಾವಣೆಗೆ ಅರ್ಜಿಗಳನ್ನು ಆನ್‌ಲೈನ್ (Online) ಮೂಲಕ ಮಾತ್ರ ಸಲ್ಲಿಸಲು ಉಲ್ಲೇಖದ ಪತ್ರದಲ್ಲಿ ತಿಳಿಸಲಾಗಿತ್ತು.

ಆನ್‌ಲೈನ್ ಮುಖಾಂತರ ಸಲ್ಲಿಕೆಯಾಗಿರುವ ಉಪನ್ಯಾಸಕರಿಂದ ಸ್ವೀಕರಿಸಲ್ಪಟ್ಟ ವರ್ಗಾವಣೆ ಅರ್ಜಿಗಳನ್ನು ಉಪನಿರ್ದೇಶಕರ ಕಛೇರಿಯಿಂದ ಪಡೆಯಲಾಗಿದ್ದು ಬಂದಂತಹ ಅರ್ಜಿಗಳನ್ನು ಪರಿಶೀಲಿಸಿ ವರ್ಗಾವಣೆಗೆ ಅರ್ಹರಿರುವ ಮತ್ತು ಅನರ್ಹರಿರುವ ಉಪನ್ಯಾಸಕರ ತಾತ್ಕಾಲಿಕ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಲಾಗಿದೆ.

ಕಡ್ಡಾಯ ವರ್ಗಾವಣೆಗೆ ಸಂಬಂಧಿಸಿದಂತೆ 'ಎ' ವಲಯದಲ್ಲಿ ಹತ್ತು ವರ್ಷಗಳ ಅಥವ ಅದಕ್ಕಿಂತ ಮೇಲ್ಪಟ್ಟು ಹೆಚ್ಚು ಸತತ ಸೇವೆಯನ್ನು ಸಲ್ಲಿಸಿದ ಉಪನ್ಯಾಸಕರ ವೃಂದದ ಪಟ್ಟಿಯನ್ನು ವಿಷಯವಾರು ಶೇಕಡ 5% ರಂತೆ ಇಳಿಕೆ ಕ್ರಮಾಂಕದ ಆಧಾರದಲ್ಲಿ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಪ್ರಕಟಿಸಲಾಗಿರುವ ತಾತ್ಕಾಲಿಕ ಪಟ್ಟಿಗಳಿಗೆ ಏನೆ ಆಕ್ಷೇಪಣೆಗಳು ಇದ್ದಲ್ಲಿ ಪೂರಕ ದಾಖಲೆಗಳೊಂದಿಗೆ ದಿನಾಂಕ:20/03/2018ರ ಒಳಗಾಗಿ **ಉಪನಿರ್ದೇಶಕರು(ಆಡಳಿತ) ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು-5600012** ಈ ವಿಳಾಸಕ್ಕೆ ಸಲ್ಲಿಸುವುದು.

ನಿಗದಿತ ದಿನಾಂಕದ ನಂತರ ಸಲ್ಲಿಸಲ್ಪಡುವ ಯಾವುದೇ ಆಕ್ಷೇಪಣೆಗಳನ್ನು ಪುರಸ್ಕರಿಸಲಾಗುವುದಿಲ್ಲ.

ಅಂತಿಮ ಆದ್ಯತಾ ಪಟ್ಟಿ ಪ್ರಕಟಿಸಿದ ನಂತರ ಕೌನ್ಸಿಲಿಂಗ್ ದಿನಾಂಕವನ್ನು ಪ್ರಕಟಿಸಲಾಗುವುದು.

ನಿರ್ದೇಶಕರು.
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ:-

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ ಇವರ ಸೂಕ್ತ ಕ್ರಮಕ್ಕಾಗಿ. (ಉಪನ್ಯಾಸಕರ ಗಮನಕ್ಕೆ ತರಲು ತಾತ್ಕಾಲಿಕ ಪಟ್ಟಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸುವುದು)
2) ಸಹಾಯಕ ನಿರ್ದೇಶಕರು- ಇ.ಆಡಳಿತ ಶಾಖೆ, ಅಂತರ್ ಜಾಲದಲ್ಲಿ ತಾತ್ಕಾಲಿಕ ಪಟ್ಟಿಯನ್ನು ಅಳವಡಿಸುವ ಬಗ್ಗೆ ಅಗತ್ಯ ಕ್ರಮಕ್ಕಾಗಿ.